ಕರ್ನಾಟಕ ಸರ್ಕಾರ
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/01/ಅಉಆ/2017-18/ನೇವಿ-1 ಕಾಲೇಜು ಶಿಕ್ಷಣ ಆಯುಕ್ತರಕಛೇರಿ,
ಬೆಂಗಳೂರು, ದಿನಾಂಕ: 10.07.2017.

ಸುತ್ತೋಲೆ

**ವಿಷಯ:** 2017-18ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ:** 1)ದಿನಾಂಕ:23.06.2017ರ ಈ ಕಛೇರಿಯ ಸಮಸಂಖ್ಯೆಯ ಸುತ್ತೋಲೆ.
2)ಸರ್ಕಾರದ ಕಡತ ಸಂಖ್ಯೆ ಇಡಿ 121 :ಡಿಸಿಇ:2017ರ ಏಕ ಕಡತದಲ್ಲಿ ನೀಡಿರುವ ಆದೇಶ.

******

2017-18ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳಲು ತೆಗೆದು ಕೊಳ್ಳಬೇಕಾದ ಕ್ರಮದ ಬಗ್ಗೆ ಉಲ್ಲೇಖ(1)ರ ಸುತ್ತೋಲೆಯಲ್ಲಿ ಮಾರ್ಗದರ್ಶನವನ್ನು ನೀಡಲಾಗಿದೆ. ಸದರಿ ಸುತ್ತೋಲೆಯನ್ನು ಮುಂದುವರಿಸುತ್ತಾ ಉಲ್ಲೇಖ(2)ರ ಕಡತದಲ್ಲಿ ಸರ್ಕಾರ ನೀಡಿರುವ ಆದೇಶದಂತೆ, ಈ ಕೆಳಕಂಡ ಅಂಶಗಳನ್ನು ಅತಿಥಿ ಉಪನ್ಯಾಸಕರನ್ನು ಆಯ್ಕೆಮಾಡುವ ಸಂದರ್ಭದಲ್ಲಿ ಪರಿಗಣಿಸುವಂತೆ ಸೂಚಿಸಲಾಗಿದೆ.

1) ಎನ್‌ಇಟಿ/ಎಸ್‌ಎಲ್‌ಇಟಿ/ಪಿಹೆಚ್‌ಡಿ ವಿದ್ಯಾರ್ಹತೆಯನ್ನು ಹೊಂದಿಲ್ಲದಿರುವ ಅಭ್ಯರ್ಥಿಗಳು ದಿನಾಂಕ:11/07/2009ರ ಒಳಗೆ ಎಂ.ಫಿಲ್ ಪದವಿಯನ್ನು ಪಡೆದಿದ್ದಲ್ಲಿ ಗರಿಷ್ಠ 10 ಅಂಕಗಳನ್ನು ಆಯ್ಕೆ ಸಂದರ್ಭದಲ್ಲಿ ಪರಿಗಣಿಸತಕ್ಕದ್ದು.
2) ಖಾಯಂ ಸಹಾಯಕ ಪ್ರಾಧ್ಯಾಪಕರನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸ್ಥಳನಿಯುಕ್ತಿ ಗೊಳಿಸಿದಾಗ, ಕಾಲೇಜಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಿರಿಯ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸತಕ್ಕದ್ದು.

10/7/17
**ಕಾಲೇಜು ಶಿಕ್ಷಣ ಆಯುಕ್ತರು**

ಇವರಿಗೆ:
1) ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರುಗಳಿಗೆ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು.
2) ಜಂಟಿ ನಿರ್ದೇಶಕರು, ಶೈಕ್ಷಣಿಕ ವಿಭಾಗ, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3) ಕೇಂದ್ರ ಕಛೇರಿಯ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳ ಆಪ್ತ ಸಹಾಯಕರುಗಳಿಗೆ-ಮಾಹಿತಿಗಾಗಿ
4) ಮಾಹಿತಿ ಅಧಿಕಾರಿಗಳು ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
5) ಕೇಂದ್ರ ಕಛೇರಿಯ ಸಂಬಂಧಪಟ್ಟ ಎಲ್ಲಾ ವಿಭಾಗಗಳ ಮ್ಯಾನೇಜರ್ ಹಾಗೂ ಅಧೀಕ್ಷಕರುಗಳಿಗೆ- ಮಾಹಿತಿಗಾಗಿ
6) ಹೆಚ್ಚುವರಿ ಪ್ರತಿ.
7) ಕಛೇರಿ ಪ್ರತಿ.